ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಹೊಸದಾಗಿ ಬೀದರ್ ಜಿಲ್ಲೆಯಲ್ಲಿ ತಾಲ್ಲೂಕು ಆಸ್ಪತ್ರೆಗಳಲ್ಲಿನ ಸೌಕರ್ಯಗಳ ಕುರಿತು

ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):-

575(743) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಹೊಸದಾಗಿ ರಚಿಸಲಾದ ತಾಲ್ಲೂಕುಗಳ ಆಸ್ಪತ್ರೆಗಳಿಗೆ ಕಳೆದ ಒಂದು ವರ್ಷದಿಂದ ಖರೀದಿಸಲಾಗಿರುವ ವೈದ್ಯಕೀಯ ಉಪಕರಣಗಳಾವುವು; (ಸಂಪೂರ್ಣ ವಿವರ ಒದಗಿಸುವುದು)

(ಆ) ಪ್ರತಿ ಆಸ್ಪತ್ರೆಗೆ ಸರಾಸರಿಯಾಗಿ ಎಷ್ಟೆಷ್ಟು ಮೊತ್ತದ ಉಪಕರಣಗಳನ್ನು ಖರೀದಿಸಲಾಗಿದೆ; ಖರೀದಿಸಿದ್ದಲ್ಲಿ ಸ್ಪಷ್ಟ ಮಾಹಿತಿ ನೀಡುವುದು;

(ಇ) ಹೊಸದಾಗಿ ಖರೀದಿಸಲಾದ ವೈದ್ಯಕೀಯ ಉಪಕರಣಗಳನ್ನು ನಿರ್ವಹಿಸಲು ಅಲ್ಲಿ ನುರಿತ ಅಧಿಕಾರಿ/ಸಿಬ್ಬಂದಿಯನ್ನು ನೇಮಿಸಿಕೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಜನರನ್ನು ನೇಮಿಸಿಕೊಳ್ಳಲಾಗಿದೆ; (ಹುದ್ದೆವಾರು ಸ್ಪಷ್ಟ ಮಾಹಿತಿ ನೀಡುವುದು)

(ಈ) ಇಲ್ಲದಿದ್ದಲ್ಲಿ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರದಂತೆ ಹೇಗೆ ನಿರ್ವಹಣೆ ಮಾಡಲಾಗುತ್ತಿದೆ? (ಮಾಹಿತಿ ಒದಗಿಸುವುದು)